## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಿಜಾಪುರ ಜಿಲ್ಲೆ ಮುದ್ದೇಬಿಹಾಳ ಪಟ್ಟಣದ ಮಹಾ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡುವ ಬಗ್ಗೆ.

ಓದಲಾಗಿದೆ: ೧) ಸರ್ಕಾರದ ಆದೇಶ ಸಂಖ್ಯೆ:ನಅಇ 82 ಬೆಮಪ್ರಾ 2004, ದಿ: 3.9.04

೨) ಮುಖ್ಯಾಧಿಕಾರಿ, ಪುರಸಭಾ ಯೋಜನಾ ಪ್ರಾಧಿಕಾರ, ಮುದ್ದೇಬಿಹಾಳ ಇವರ ಪತ್ರ ಸಂಖ್ಯೆ:ಯೋಪ್ರಾ:ಪುಸಮು:ಮಹಾಯೋಜನೆ:2006-07, ದಿನಾಂಕ: 24.3.07.

೩) ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಏಕ ಕಡತ ಸಂಖ್ಯೆ. ನಯೋ(5)ಉನಿ1:ಮುದ್ದೇಬಿಹಾಳ:ಮ.ಯೋ.ಅಂ:2007, ದಿನಾಂಕ: 12.4.07.

ಪ್ರಸ್ತಾವನೆ:

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, ಬಿಜಾಪುರ ಜಿಲ್ಲೆ, ಮುದ್ದೇಬಿಹಾಳ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆಯನ್ನು ನೀಡಿ ಆದೇಶಿಸಿದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ಮುದ್ದೇಬಿಹಾಳ ಪುರಸಭೆ ಯೋಜನಾ ಪ್ರಾಧಿಕಾರವು ಮುದ್ದೇಬಿಹಾಳ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗಾಗಿ ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಮುಖಾಂತರ ಸಲ್ಲಿಸಿದೆ.

ಮೇಲೆ ಓದಲಾದ (3) ರ ಏಕ ಕಡತದಲ್ಲಿ ನಗರ ಯೋಜನಾ ನಿರ್ದೇಶಕರು, ಮುದ್ದೇಬಿಹಾಳ ಪಟ್ಟಣದ ಜನಸಂಖ್ಯೆಯು 2021 ರಲ್ಲಿ 55,000 ಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ, ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಮುದ್ದೇಬಿಹಾಳ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 850 ಹೆಕ್ಟೇರ್ ಪ್ರದೇಶದಲ್ಲಿ 631.62 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ, ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 12 ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ ಒಟ್ಟು 631.62 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 339.72 ಹೆಕ್ಟೇರ್ (ಶೇ.54.08), ವಾಣಿಜ್ಯಕ್ಕಾಗಿ 37.53 ಹೆಕ್ಟೇರ್ (ಶೇ.5.97), ಕೈಗಾರಿಕೆಗಾಗಿ 29.08 ಹೆಕ್ಟೇರ್ (ಶೇ.4.63), ಸಾರ್ವಜನಿಕ: ಅರೆ ಸಾರ್ವಜನಿಕ ವಲಯಕ್ಕಾಗಿ 39.05 ಹೆಕ್ಟೇರ್ (ಶೇ.6.21), ನಾಗರೀಕ ಸೌಲಭ್ಯಕ್ಕಾಗಿ 03.04 ಹೆಕ್ಟೇರ್ (ಶೇ.0.48), ಉದ್ಯಾನವನ: ಬಯಲು ಜಾಗೆಗಾಗಿ 44.18 ಹೆಕ್ಟೇರ್ (ಶೇ.7.07), ಹಾಗೂ ಸಾರಿಗೆ ಮತ್ತು ಸಂಪರ್ಕ ವಲಯಕ್ಕೆ 135.40 ಹೆಕ್ಟೇರ್ (ಶೇ.21.65) ಪ್ರದೇಶವನ್ನು ನಿಗಧಿಪಡಿಸಿ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ

ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಈ ವಿಷಯವನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

<u>ಸರ್ಕಾರದ ಆದೇಶ ಸಂಖ್ಯೆ. ನಅಇ 114 ಬೆಮಪ್ರಾ 2007, ಬೆಂಗಳೂರು, ದಿನಾಂಕ: 7.6.2007.</u>

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಿಜಾಪುರ ಜಿಲ್ಲೆ, ಮುದ್ದೇಬಿಹಾಳ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಜಿ.ವಾಲಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

೧. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
೨. ಮುಖ್ಯಾಧಿಕಾರಿಗಳು, ಪುರಸಭಾ ಯೋಜನಾ ಪ್ರಾಧಿಕಾರ, ಮುದ್ದೇಬಿಹಾಳ.
೩. ನಗರ ಯೋಜನಾ ಜಂಟಿ ನಿರ್ದೇಶಕರು, ವಲಯ ಕಛೇರಿ, ಧಾರವಾಡ.
೪. ನಗರ ಯೋಜನಾ ಸಹಾಯಕ ನಿರ್ದೇಶಕರು, ಬಿಜಾಪುರ.
೫. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
೬. ಕರ್ನಾಟಕ ರಾಜ್ಯಪತ್ರ.
೭. ಸರ್ಕಾರದ ಕಾರ್ಯದರ್ಶಿಗಳ/ಜಂಟಿ ಕಾರ್ಯದರ್ಶಿಗಳ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ
೮. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.